# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಮಾನ್ಯ ವಿಧಾನ ಪರಿಷತ್ತಿನ ಸದಸ್ಯರು | : | ಶ್ರೀ ಕುಶಾಲಪ್ಪ ಎಂ ಪಿ (ಸುಜಾ)<br>(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1501 |
| ಉತ್ತರಿಸಬೇಕಾದ ದಿನಾಂಕ | : | 18-12-2025 |
| ಉತ್ತರಿಸಬೇಕಾದ ಸಚಿವರು | : | ಸನ್ಮಾನ್ಯ ಮುಖ್ಯಮಂತ್ರಿಗಳು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಸಹಕಾರ ಇಲಾಖೆಯಿಂದ ರೈತರಿಗಾಗಿ ಇರುವ ವಿವಿಧ ಸಾಲ ಸೌಲಭ್ಯಗಳು ಯಾವುವು: (ಸಂಪೂರ್ಣ ವಿವರ ನೀಡುವುದು) | ಸಹಕಾರ ಇಲಾಖೆಯಿಂದ ಸಹಕಾರ ಸಂಘಗಳ ಮೂಲಕ ರೈತರಿಗೆ ಈ ಕೆಳಕಂಡ ಬಡ್ಡಿ ಸಹಾಯಧನ ಯೋಜನೆಯ ಸೌಲಭ್ಯಗಳನ್ನು ನೀಡಲಾಗುತ್ತಿದೆ.<br><br>1) ರೂ. 5.00 ಲಕ್ಷಗಳವರೆಗಿನ ಅಲ್ಪಾವಧಿ ಬೆಳೆ ಸಾಲವನ್ನು ಮತ್ತು ರೂ.2.00 ಲಕ್ಷಗಳವರೆಗೆ ಪಶುಸಂಗೋಪನೆ/ಮೀನುಗಾರಿಕೆ ಉದ್ದೇಶಗಳಿಗೆ ದುಡಿಯುವ ಬಂಡವಾಳದ ಸಾಲವನ್ನು ಶೂನ್ಯ ಬಡ್ಡಿದರದಲ್ಲಿ ವಿತರಿಸುವ ಯೋಜನೆ.<br><br>2) ರೂ.15.00 ಲಕ್ಷಗಳವರೆಗೆ ಮಧ್ಯಮಾವಧಿ/ ದೀರ್ಘಾವಧಿ ಕೃಷಿ ಸಾಲವನ್ನು ಶೇ.3 ರ ಬಡ್ಡಿ ದರದಲ್ಲಿ ವಿತರಿಸುವ ಯೋಜನೆ.<br><br>3) ಸಹಕಾರ ಸಂಘಗಳು ರೈತರು ಬೆಳೆದ ಕೃಷಿ ಉತ್ಪನ್ನಗಳನ್ನು ಗೋದಾಮುಗಳಲ್ಲಿ ಶೇಖರಣೆ ಮಾಡಿ ವಿತರಿಸುವ ಅಡಮಾನ ಸಾಲವನ್ನು ಶೇ.7 ರ ಬಡ್ಡಿ ದರದಲ್ಲಿ ವಿತರಿಸುವ ಯೋಜನೆ.<br><br>4) ಶಿವಮೊಗ್ಗ, ಚಿಕ್ಕಮಗಳೂರು, ಕೊಡಗು, ಹಾಸನ. ದಕ್ಷಿಣ ಕನ್ನಡ, ಉಡುಪಿ ಹಾಗೂ ಉತ್ತರ ಕನ್ನಡ ಜಿಲ್ಲೆಗಳ ಗುಡ್ಡಗಾಡು ಪ್ರದೇಶಗಳ ರೈತರ ಕೃಷಿ ಉತ್ಪನ್ನ ಮತ್ತು ಪರಿಕರಗಳ ಸಾಗಾಣಿಕೆಗೆ ನಾಲ್ಕು ಚಕ್ರದ ಪಿಕ್‌ಅಪ್ ವ್ಯಾನ್ ಖರೀದಿಸಲು ಸಹಕಾರ ಸಂಘಗಳು ರೂ.7.00 ಲಕ್ಷವರೆಗಿನ ಸಾಲವನ್ನು ಶೇ.4 ರ ಬಡ್ಡಿ ದರದಲ್ಲಿ ವಿತರಿಸುವ ಯೋಜನೆ.<br><br>5) ರೈತರು ತಮ್ಮ ಹಾಗೂ ತಮ್ಮ ನೆರೆಹೊರೆಯ ರೈತರ ಉತ್ಪನ್ನಗಳನ್ನು ಸಂಗ್ರಹಿಸಲು ಅನುವಾಗುವಂತೆ ಗೋದಾಮು ನಿರ್ಮಿಸಲು ಬ್ಯಾಂಕುಗಳು ನೀಡುವ ರೂ.20 ಲಕ್ಷವರೆಗಿನ ಸಾಲಕ್ಕೆ ಸರ್ಕಾರ ಶೇ.7 ರಷ್ಟು ಬಡ್ಡಿ ಸಹಾಯಧನ ನೀಡುವ ಯೋಜನೆ. |

| | | |
|---|---|---|
| | | ಸಹಕಾರ ಸಂಘಗಳು ತಮ್ಮ ಸ್ವಂತ ಬಂಡವಾಳ ಮತ್ತು ಮೇಲ್ಮಟ್ಟದ ಸಂಸ್ಥೆಗಳು ನೀಡುವ ಪುನರ್ಧನವನ್ನು ಉಪಯೋಗಿಸಿಕೊಂಡು ಸರ್ಕಾರ ನಿಗದಿಪಡಿಸಿದ ಬಡ್ಡಿದರದಲ್ಲಿ ರೈತರಿಗೆ ಸಾಲ ವಿತರಿಸಿ, ವಿತರಿಸಿದ ಸಾಲ ಸಕಾಲದಲ್ಲಿ ವಸೂಲಾದಲ್ಲಿ ಸರ್ಕಾರದಿಂದ ನಿಯಮಿತ ಪ್ರಮಾಣದ ಬಡ್ಡಿ ಸಹಾಯಧನವನ್ನು ಒದಗಿಸಲಾಗುತ್ತಿದೆ. |
| ಆ) | ಸದರಿ ಸಾಲ ಸೌಲಭ್ಯಗಳನ್ನು ಪಡೆಯಲು ರೈತರು ಅನುಸರಿಸಬೇಕಾದ ನಿಯಮ ಮತ್ತು ಮಾನದಂಡಗಳೇನು; | ರೈತರು ಈ ಯೋಜನೆಗಳ ಲಾಭ ಪಡೆಯಲು ಅನುಸರಿಸಬೇಕಾದ ನಿಯಮಗಳ ವಿವರವನ್ನು **ಅನುಬಂಧ-1** ರಲ್ಲಿ ನೀಡಲಾಗಿದೆ. |
| ಇ) | ರೈತರಿಗೆ ನೀಡುವ ವಿವಿಧ ವಾಹನ ಸಾಲ ಯೋಜನೆಗಳು ಯಾವುವು; | ಶಿವಮೊಗ್ಗ, ಚಿಕ್ಕಮಗಳೂರು, ಕೊಡಗು, ಹಾಸನ. ದಕ್ಷಿಣ ಕನ್ನಡ, ಉಡುಪಿ ಹಾಗೂ ಉತ್ತರ ಕನ್ನಡ ಜಿಲ್ಲೆಗಳ ಗುಡ್ಡಗಾಡು ಪ್ರದೇಶಗಳಲ್ಲಿ ರೈತರಿಗೆ ನಾಲ್ಕು ಚಕ್ರದ ಪಿಕ್‌ಅಪ್ ವ್ಯಾನ್ (Pick-up Van) ಖರೀದಿಸಲು ರೂ.7 ಲಕ್ಷಗಳವರೆಗೆ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು ಮತ್ತು ಪಿಕಾರ್ಡ್ ಬ್ಯಾಂಕುಗಳ ಮೂಲಕ ನಿವ್ವಳ ಶೇ.4 ರ ಬಡ್ಡಿ ದರದಲ್ಲಿ ಸಾಲ ವಿತರಿಸುವ ಯೋಜನೆ ಜಾರಿಯಲ್ಲಿರುತ್ತದೆ.<br><br>ಇದಲ್ಲದೇ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕುಗಳು ಹಾಗೂ ಪ್ರಾಥಮಿಕ ಕೃಷಿ ಸಹಕಾರ ಸಂಘಗಳು ತಮ್ಮ ಸಾಲದ ನಿಯಮಗಳನ್ವಯ ಸಾಮಾನ್ಯ ಬಡ್ಡಿ ದರದಲ್ಲಿ ಇತರೆ ರೀತಿಯ ವಾಹನ ಖರೀದಿಸಲು ಸಾಲ ವಿತರಿಸಲಾಗುತ್ತಿದೆ. |
| ಈ) | ಕೊಡಗು ಜಿಲ್ಲೆಯ ರೈತರಿಗೆ ನೀಡಲಾಗಿರುವ ವಾಹನ ಸಾಲದ ಮೊತ್ತ ಎಷ್ಟು? (ವಿವರವನ್ನು ತಾಲ್ಲೂಕುವಾರು ನೀಡುವುದು) | ಕೊಡಗು ಜಿಲ್ಲೆಯ ರೈತರಿಗೆ ಕೊಡಗು ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕಿನ ಮೂಲಕ 2023-24 ನೇ ಸಾಲಿನಿಂದ ದಿನಾಂಕ: 30.11.2025 ರ ವರೆಗೆ ರಿಯಾಯಿತಿ ಬಡ್ಡಿ ದರದಲ್ಲಿ ನಾಲ್ಕು ಚಕ್ರದ ಪಿಕ್‌ಅಪ್ ವ್ಯಾನ್ ಖರೀದಿಸಲು ಹಾಗೂ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು ಮತ್ತು ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕಿನ ಮೂಲಕ ಸಾಮಾನ್ಯ ಬಡ್ಡಿ ದರದಲ್ಲಿ ಇತರೆ ವಾಹನಗಳನ್ನು ಖರೀದಿಸಲು ನೀಡಿರುವ ಸಾಲದ ತಾಲ್ಲೂಕುವಾರು ವಿವರವನ್ನು **ಅನುಬಂಧ-2** ರಲ್ಲಿ ನೀಡಲಾಗಿದೆ. |

**ಸಂಖ್ಯೆ: ಸಿಒ 338 ಸಿಎಲ್‌ಎಸ್ 2025**

**(ಸಿದ್ದರಾಮಯ್ಯ)**
ಮುಖ್ಯಮಂತ್ರಿ